ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿನ ಅನುದಾನದ ಮಿತಿಯೊಳಗೆ ಹಂತಹಂತವಾಗಿ ಪ್ರತಿ ವರ್ಷವೂ ಮೂಲಭೂತ ಸೌಲಭ್ಯ ಒದಗಿಸಲಾಗುತ್ತಿದ್ದು, ನಿವೇಶನ ದೊರೆತ ನಂತರ ಈ ಬಗ್ಗೆ ಕ್ರಮವಹಿಸಲಾಗುವುದು.

ಸಕಲೇಶಪುರ ಮತ್ತು ಆಲೂರು ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ

246 (568) ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಹಾಸನ ಜಿಲ್ಲೆ, ಸಕಲೇಶಪುರ ತಾಲ್ಲೂಕಿನ ಹೆತ್ತೂರು ಪ್ರಥಮ ದರ್ಜೆ ಕಾಲೇಜಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಕಾಲೇಜಿಗೆ ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಹಾಸನ ಜಿಲ್ಲೆ, ಆಲೂರು ಪಟ್ಟಣದ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿದ್ದು, ಈಗಿರುವ ಕಟ್ಟಡ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಸಾಕಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಹೆಚ್ಚುವರಿ ಕಟ್ಟಡಗಳನ್ನು ಯಾವಾಗ ನಿರ್ಮಿಸಲಾಗುವುದು? (ಪೂರ್ಣ ಮಾಹಿತಿ ನೀಡುವುದು)

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ನಿವೇಶನದ ಲಭ್ಯತೆ ಹಾಗೂ ಅನುದಾನದ ಲಭ್ಯತೆಯನುಸಾರ ಕಟ್ಟಡವನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದು.

ಇ) ಬಂದಿದೆ.

ಈ) ಅನುದಾನದ ಲಭ್ಯತೆಯನುಸಾರ ಹೆಚ್ಚುವರಿ ಕೊಠಡಿಯನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದು.

ಶಿಕ್ಷಕರ ಕೊರತೆ

301 (368) ಶ್ರೀ ಶ್ರೀನಿವಾಸ್ ಎಂ. (ಮಂಡ್ಯ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಂಡ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಶಿಕ್ಷಕರ ಕೊರತೆ ನೀಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

ಇ) ಮಂಡ್ಯ ಉತ್ತರ ವಲಯದಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ಹುದ್ದೆಗಳು ಖಾಲಿ ಇರುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗೆಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಹೌದು

ಆ) ಪ್ರೌಢ ಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಿದ್ದು, ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆ ಭರ್ತಿಗೆ ಅನುಮತಿಸಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿದ್ದು, ಸಹಮತಿ ದೊರೆತ ತಕ್ಷಣ ಕ್ರಮವಹಿಸಲಾಗುವುದು. ಶಾಲೆಗಳಲ್ಲಿ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಅತಿಥಿ ಶಿಕ್ಷಕರನ್ನು ನೇಮಿಸಿ ಕೊಳ್ಳಲು ಆರ್ಥಿಕ ಇಲಾಖೆಯ ಅನುಮತಿ ಕೋರಿದ್ದು ದೊರೆತ ತಕ್ಷಣ ಕ್ರಮವಹಿಸಲಾಗುವುದು.

ಇ) ಮೇಲಿನಂತೆ

ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ

204 (420) ಶ್ರೀ ಬಂಡೆಪ್ಪ ಕಾಶೆಂಪೂರ್ (ಬೀದರ್ ದಕ್ಷಿಣ) :– ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬೀದರ್ ಜಿಲ್ಲೆಯಲ್ಲಿ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆಯಡಿಯಲ್ಲಿ ನೀಡಬೇಕಾಗಿರುವ ಬಾಂಡ್‌ಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

ಆ) ಬಾಕಿ ಇರುವ ಬಾಂಡ್‌ಗಳನ್ನು ಯಾವಾಗ ವಿತರಿಸಲಾಗುವುದು;

ಇ) ಈ ಬಾಂಡ್‌ಗಳ ವಿತರಣೆಯ ವಿಳಂಬಕ್ಕೆ ಕಾರಣಗಳೇನು;

ಈ) ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬಾಕಿ ಇರುವ ಬಾಂಡ್‌ಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)